# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 156 (181)

ಸದಸ್ಯರ ಹೆಸರು : ಶ್ರೀ ಭೀಮರಾವ್ ಬಸವರಾಜ ಪಾಟೀಲ್,
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ಸಚಿವರು : ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು

ಉತ್ತರಿಸಬೇಕಾದ ದಿನಾಂಕ : 18.08.2026

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ನಗರದಲ್ಲಿ ತೋಟಗಾರಿಕೆ ಮಹಾವಿದ್ಯಾಲಯ ಕಾಲೇಜಿನ ಮಾನ್ಯತೆ ವಿಸ್ತರಿಸಲು ಮೀಸಲಿಟ್ಟ ಜಮೀನಿನ ಪೈಕಿ 25 ಎಕರೆಯಲ್ಲಿ ಕ್ರೀಡಾಂಗಣ ನಿರ್ಮಿಸಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು; | ಗಮನಕ್ಕೆ ಬಂದಿದೆ.<br>ಬೀದರ್ ಮಹಾವಿದ್ಯಾಲಯದಲ್ಲಿ ಪ್ರಸ್ತುತ ಸ್ನಾತಕ ಪದವಿಯನ್ನು ನಡೆಸಲಾಗುತ್ತಿದ್ದು, ಈ ಭಾಗದ ವಿದ್ಯಾರ್ಥಿಗಳು ಸ್ನಾತಕೋತ್ತರ ಪದವಿಗಾಗಿ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಅಂಗ ಸಂಸ್ಥೆಗಳಾದ ಬಾಗಲಕೋಟೆ, ಅರಭಾವಿ ಮತ್ತು ಬೆಂಗಳೂರಿಗೆ ಹೋಗುವ ಅನಿವಾರ್ಯತೆ ಇರುವುದರಿಂದ ಉನ್ನತ ಶಿಕ್ಷಣಕ್ಕೆ ತೊಂದರೆಯಾಗುತ್ತಿರುವುದನ್ನು ಮನಗಂಡು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯವು ಬೀದರ್ ಮಹಾವಿದ್ಯಾಲಯದಲ್ಲಿ ಸ್ನಾತಕೋತ್ತರ ಪದವಿಯನ್ನು ಪ್ರಾರಂಭ ಮಾಡಲು ಯೋಜನೆ ಹೊಂದಿರುತ್ತದೆ.<br><br>ತೋಟಗಾರಿಕೆ ಮಹಾವಿದ್ಯಾಲಯ, ಬೀದರನ ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗಳಿಗೆ ಹಾಗೂ ಕಲ್ಯಾಣ ಕರ್ನಾಟಕ ಭಾಗದ ರೈತರಿಗೆ ತೋಟಗಾರಿಕೆ ಬೆಳೆಗಳಲ್ಲಿ ತಾಂತ್ರಿಕ ಮಾಹಿತಿ ಹಾಗೂ ಆಧುನಿಕ ತಂತ್ರಜ್ಞಾನ ತರಬೇತಿ ಮತ್ತು ಪ್ರಾತ್ಯಕ್ಷಿಕತೆಗೆ ಜಮೀನು ಅತೀ ಅವಶ್ಯವಿರುವುದರಿಂದ 25 ಎಕರೆ ಜಮೀನನ್ನು ಕ್ರೀಡಾಂಗಣ ನಿರ್ಮಾಣಕ್ಕೆ ನೀಡದೇ ಮಹಾವಿದ್ಯಾಲಯದಲ್ಲಿಯೇ ಇರಿಸಿಕೊಳ್ಳುವ ಬಗ್ಗೆ ಪರಿಶೀಲಿಸಲಾಗುತ್ತಿದೆ. |
| ಆ) | ಕ್ರೀಡಾಂಗಣ ನಿರ್ಮಿಸಿದರೆ ಕಾಲೇಜು ಮಾನ್ಯತೆ ರದ್ದಾಗಿ ವಿದ್ಯಾರ್ಥಿಗಳ ಭವಿಷ್ಯಕ್ಕೆ ಮಾರಕವಾಗುವುದಿಲ್ಲವೇ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? | |

ಸಂಖ್ಯೆ: HORTI 438 HGM 2026

(ಎಸ್. ಎಸ್. ಮಲ್ಲಿಕಾರ್ಜುನ್)
ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು